All India Radio: Bangalore
Regional Bulletin In Kannada
18.10.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

೧. ಕೆರಳಿಸುವ ಸುದ್ದಿ ನೀಡುವ ಮೊದಲು ಪತ್ರಕರ್ತರು ಆತ್ಮಾವಲೋಕನ ಮಾಡಿಕೊಳ್ಳಬೇಕು - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಮುಂದಿನ ಒಲಿಂಪಿಕ್ಸ್ ನಲ್ಲಿ ಅತಿಹೆಚ್ಚು ಪಡೆಯುವುದು ನಮ್ಮ ಗುರಿ - ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

೩. ಬೆಳಗಾವಿ ಗಡಿಯ ೧೦ ಗ್ರಾಮಗಳಲ್ಲಿ ಸರ್ಕಾರಿ ಕನ್ನಡ ಶಾಲೆ ಆರಂಭಿಸಲು ಶೀಘ್ರದಲ್ಲಿ ಸರ್ಕಾರ ನಿರ್ಧಾರ - ಸಚಿವ ಎಚ್.ಕೆ. ಪಾಟೀಲ್

೪. ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತ, ಕೇರಳ, ತಮಿಳುನಾಡು, ಕರಾವಳಿ ಕರ್ನಾಟಕದಲ್ಲಿ ಮಳೆಯಾಗುವ ಸಾಧ್ಯತೆ

><><><><><

ಕೆರಳಿಸುವ ಸುದ್ದಿಗಳಿಂದ ಸಮಾಜಕ್ಕೆ ಪ್ರಯೋಜನವಿದೆಯೇ ಎಂದು ಪತ್ರಕರ್ತರು ಆತ್ಮಾವಲೋಕನ ಮಾಡಿಕೊಳ್ಳಬೇಕು. ಒಂದು ಛಾಯಾಚಿತ್ರ ಸಾವಿರ ಪದಗಳಿಗೆ ಸಮ. ಆದರೆ ತೆಗೆದ ಫೋಟೋಗಳನ್ನು ಬೇರೆ ಸಂದರ್ಭಗಳಲ್ಲಿ ಬಳಸಿ ತಿರುಚಿದ ಅಭಿಪ್ರಾಯ ಮೂಡಿಸುವುದು ಆರೋಗ್ಯಕರವಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿ ಜಿಲ್ಲಾ ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಆಯ್ಕೆ ಆದ ಫೋಟೋ ಜರ್ನಲಿಸ್ಟ್‌ಗಳಿಗೆ ಪ್ರಶಸ್ತಿ ವಿತರಿಸಿ ಮಾತನಾಡಿದ ಅವರು, ಪತ್ರಕರ್ತರು ಸತ್ಯ ಹೇಳ್ತಾರೆ ಎನ್ನುವ ನಂಬಿಕೆಯಿಂದ ನಿಮ್ಮನ್ನು ಪ್ರಜಾಪ್ರಭುತ್ವದ ನಾಲ್ಕನೇ ಆಧಾರ ಸ್ತಂಬ ಎಂದು ಕರೆಯುತ್ತಾರೆ. ಪತ್ರಕರ್ತರು ಸುಳ್ಳು ಹೇಳುವುದಿಲ್ಲ ಎನ್ನುವ ನಂಬಿಕೆ ಈಗಲೂ ಇದೆ. ಆದರೆ, ಊಹಾ ಪತ್ರಿಕೋದ್ಯಮ ವಿಪರೀತ ಆಗುತ್ತಿದೆ. ಊಹೆ ಮಾಡಿಕೊಂಡು ಸುದ್ದಿ ಮಾಡುವುದು ಗೌರವ ತರುವುದಿಲ್ಲ ಎಂದು ಅವರು ಹೇಳಿದರು.

ಪತ್ರಕರ್ತರು ಮೌಢ್ಯವನ್ನು ಬೆಂಬಲಿಸಬಾರದು. ಬಸವಣ್ಣನವರು ೧೨ನೇ ಶತಮಾನದಲ್ಲೇ ಮೌಢ್ಯದ ವಿರುದ್ಧ ಚಳವಳಿ ನಡೆಸಿದರು. ಆದರೆ ಇವತ್ತಿನ ಪತ್ರಕರ್ತರು ಮೌಢ್ಯದ ವಿರುದ್ಧ ಜನರನ್ನು ಎಚ್ಚರಿಸುವ ಕೆಲಸವನ್ನೇ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಧ್ವನಿ : ಸಿದ್ದರಾಮಯ್ಯ  (೩೫ ಸೆಕೆಂಡ್‌ಗಳು)

><><><><

ಕ್ರೀಡೆಯು ನಮ್ಮನ್ನು ದೈಹಿಕವಾಗಿ ಮಾತ್ರವಲ್ಲ, ಮಾನಸಿಕವಾಗಿಯೂ ಸದೃಢರಾಗಿಡಲು ಸಹಾಯ ಮಾಡುತ್ತದೆ. ಮಕ್ಕಳು ತಮ್ಮನ್ನು ಕ್ರೀಡೆಯಲ್ಲೂ ತೊಡಗಿಸಿಕೊಳ್ಳಬೇಕು, ಪೋಷಕರು ಹಾಗೂ ಶಿಕ್ಷಕರು ಮಕ್ಕಳ ಆಸಕ್ತಿ ಹಾಗೂ ಸಾಮರ್ಥ್ಯವನ್ನು ಗುರುತಿಸಿ ಆ ನಿಟ್ಟಿನಲ್ಲಿ ಸಾಧನೆಗೆ ಪ್ರೋತ್ಸಾಹ ನೀಡಬೇಕು ಎಂದು ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಮಹಾಲಕ್ಷ್ಮಿ ಲೇಔಟ್‌ನ  ಡಾ. ರಾಜ್‌ಕುಮಾರ್ ಒಳಾಂಗಣ ಕ್ರೀಡಾಂಗಣದಲ್ಲಿ ಸ್ಥಳೀಯ ಕ್ರೀಡಾ ಪ್ರತಿಭೆಗಳು ಮತ್ತು ಯುವಕರ ದೈಹಿಕ ಸಾಮರ್ಥ್ಯವನ್ನು ಬೆಳೆಸುವ ಪ್ರಮುಖ ಉಪಕ್ರಮವಾದ ಸಂಸದ್ ಖೇಲ್ ಮಹೋತ್ಸವ ೨೦೨೫ ಅನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮೆಲ್ಲರ ಗುರಿ ಮುಂಬರುವ ಒಲಿಂಪಿಕ್ಸ್ ನಲ್ಲಿ ಹೆಚ್ಚಿನ ಪದಕಗಳನ್ನು ಪಡೆಯುವತ್ತ ಇರಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ೫೦೦ ಕ್ಕೂ ಹೆಚ್ಚು ಜನರು ಭಾಗವಹಿಸಿದ್ದು, ಯೋಗ ಸ್ಪರ್ಧೆ,  ಹಗ್ಗಜಗ್ಗಾಟ ಹಾಗೂ ಹಿರಿಯ ನಾಗರಿಕರಿಗಾಗಿ ನಿಂಬೆ ಮತ್ತು ಚಮಚದ ಜೊತೆ ಓಟದ ಸ್ಪರ್ಧೆ ಆಯೋಜಿಸಲಾಗಿತ್ತು. ಯೋಗ ಪ್ರದರ್ಶನ ಹಾಗೂ ಯಕ್ಷಗಾನ ಪ್ರದರ್ಶನ ನಡೆಯಿತು. ಈ ಸಂದರ್ಭದಲ್ಲಿ ೧೦ ಯೋಗ ಗುರುಗಳು ಮತ್ತು ಯೋಗ ಸಾಧಕರನ್ನು ಸನ್ಮಾನಿಸಲಾಯಿತು.

><><><><

ಗಡಿ ರಕ್ಷಣೆ, ಭಾಷಾ ಹಿತಾಸಕ್ತಿಗೆ ಸರ್ಕಾರ ಬದ್ಧವಾಗಿದ್ದು, ಬೆಳಗಾವಿ ಗಡಿಯ ೧೦ ಗ್ರಾಮದಲ್ಲಿ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳನ್ನು ಆರಂಭಿಸಲು ಸರ್ಕಾರ ಶೀಘ್ರದಲ್ಲಿಯೇ ಆದೇಶ ನೀಡಲಿದೆ. ಅವಶ್ಯವೆನಿಸಿದಲ್ಲಿ ಅಂಗವಾಡಿ ಕೇಂದ್ರಗಳನ್ನೂ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಗಡಿ ಪ್ರದೇಶಗಳ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ ಆಶ್ರಯದಲ್ಲಿ ಆಯೋಜಿಸಲಾದ ಗಡಿನಾಡಿನಲ್ಲಿ ಕನ್ನಡ ಜಾಗೃತಿ ಮತ್ತು ಸಾಂಸ್ಕೃತಿಕ ಸಂಭ್ರಮಕ್ಕೆ ಚಾಲನೆ ನೀಡಿ

ಮಾತನಾಡಿದ ಅವರು, ಕನ್ನಡಿಗರು ಸರ್ವಭಾಷಿಕರೊಂದಿಗೆ ಸಹಬಾಳ್ವೆ ನಡೆಸುವ ಔದಾರ್ಯ ತೋರಿಸಿದ್ದಾರೆ. ಗಡಿಯಲ್ಲಿರುವ ಎಲ್ಲ ಭಾಷಿಕರೂ ಕರ್ನಾಟಕದವರೇ ಆಗಿದ್ದು, ಕರ್ನಾಟಕ ರಾಜ್ಯೋತ್ಸವದಲ್ಲಿ ಎಲ್ಲರೂ ಉತ್ಸಾಹದಿಂದ ಪಾಲ್ಗೊಂಡು ಸಂಭ್ರಮಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ಧ್ವನಿ : ಎಚ್.ಕೆ. ಪಾಟೀಲ್ (೨೫ ಸೆಕೆಂಡ್‌ಗಳು)

ಬೆಳಗಾವಿ ಗಡಿ ವಿವಾದ ಮುಗಿದ ಅಧ್ಯಯವಾಗಿದೆ. ಗಡಿ ವಿಷಯ ವಿಷಯ ಕುರಿತು ಮಹಾಜನ್ ವರದಿಯನ್ನು ಈ ಹಿಂದಿನಿಂದ ಕರ್ನಾಟಕ ಸರ್ಕಾರ ಒಕ್ಕೋರಿಲಿನಿಂದ ಒಪ್ಪಿಕೊಂಡಿದೆ ಎಂದು ಅವರು ಹೇಳಿದರು. ಈ ಕಾರ್ಯಕ್ರಮದಲ್ಲಿ ಸಂಸದ ಜಗದೀಶ ಶೆಟ್ಟರ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

><><><><><

ವಿದ್ಯೆ ಯಾರೊಬ್ಬರ ಸ್ವತ್ತು ಅಲ್ಲ. ಎಲ್ಲರಿಗೂ ಸಮಾನ ಅವಕಾಶಗಳು ದೊರೆತಾಗ ಮಾತ್ರ ಸಮ ಸಮಾಜದ ನಿರ್ಮಾಣ ಮಾಡಲು ಸಾದ್ಯ. ಎಲ್ಲರೂ ಶಿಕ್ಷಣ ಪಡೆಯಬೇಕು. ಸಮಾನ ಅವಕಾಶಗಳನ್ನು ನೀಡಿ ಎಲ್ಲರಿಗೂ ಶಕ್ತಿ ನೀಡಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಮಾನಸ ಗಂಗೋತ್ರಿಯ ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವಿಶ್ವಜ್ಞಾನಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಜತ ಮಹೋತ್ಸವ ಹಾಗೂ ನೂತನ ಜ್ಞಾನ ದರ್ಶನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಸಮಾಜವನ್ನು ವೈಜ್ಞಾನಿಕವಾಗಿ ಅರ್ಥ ಮಾಡಿಕೊಂಡಿದ್ದ ವಿಶ್ವ ಜ್ಞಾನಿ ಅಂಬೇಡ್ಕರ್. ಸಮಾಜದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳು ಇರಲಿಲ್ಲ. ಆದ್ದರಿಂದ ಸಮಾಜದಲ್ಲಿ ಅಸಮಾನತೆ ನಿರ್ಮಾಣ ಆಯಿತು. ಎಲ್ಲಿಯವರೆಗೆ ಜಾತಿ ವ್ಯವಸ್ಥೆ ಇರುತ್ತದೆ ಅಲ್ಲಿಯವರೆಗೆ ಮೀಸಲಾತಿ ಇರಬೇಕು. ಜಾತಿ ವ್ಯವಸ್ಥೆ ಇರುವವರೆಗೆ ಸಮಾನತೆ ಬರಲು ಸಾಧ್ಯವಿಲ್ಲ. ಆದ್ದರಿಂದ ಜಾತಿ ವ್ಯವಸ್ಥೆಯನ್ನು ತೊಡೆದು ಹಾಕಬೇಕು. ಜಾತಿ ವ್ಯವಸ್ಥೆ ಜಡತ್ವದಿಂದ ಕೂಡಿದೆ. ಅದಕ್ಕೆ ಚಲನೆ ಇಲ್ಲ. ಇದು ಆಳವಾಗಿ ಬೇರು ಬಿಟ್ಟಿದೆ. ಬಸವಣ್ಣ ಅವರು ಜಾತಿ ವ್ಯವಸ್ಥೆ ತೊಡೆದು ಹಾಕುವಂತೆ ೮೫೦ ವರ್ಷಗಳ ಹಿಂದೆಯೇ ಹೇಳಿದ್ದರು. ಆದರೂ ಅದು ಇನ್ನೂ ಸಾಧ್ಯವಾಗಿಲ್ಲ ಎಂದು ಅವರು ತಿಳಿಸಿದರು. ಆಂಧ್ರ ಪ್ರದೇಶದ ಮಾದರಿಯಲ್ಲಿ ಅಂಬೇಡ್ಕರ್ ಉದ್ಯಾನವನವನ್ನು ಬೆಂಗಳೂರಿನಲ್ಲಿ ಸ್ಥಾಪನೆ ಮಾಡಲು ೨೫ ಎಕರೆ ಜಾಗವನ್ನು ಗುರುತಿಸಲಾಗಿದೆ. ಇದರಲ್ಲಿ ಅಂಬೇಡ್ಕರ್ ಬಾಲ್ಯದಿಂದ

ಅವರ ಕೊನೆಯವರೆಗೆ ನಡೆದುಬಂದ ಹಾದಿಯನ್ನು ಚಿತ್ರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ.

><><><><

ಹೊಸಪೇಟೆ ಸಮೀಪದ ಅನಂತಶಯನ ಗುಡಿ ರೈಲ್ವೆ ಮೇಲ್ ಸೇತುವೆ ನಿರ್ಮಾಣ ಕಾಮಗಾರಿಯಲ್ಲಿ ನಿವೇಶನಗಳನ್ನು ಕಳೆದುಕೊಂಡವರಿಗೆ ಪರಿಹಾರ ಧನ ಒದಗಿಸುವುದಾಗಿ ವಿಜಯನಗರದ ಶಾಸಕರಾದ ಹೆಚ್.ಆರ್. ಗವಿಯಪ್ಪ ಭರವಸೆ ನೀಡಿದರು. ಅವರು ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಕ್ರೀಡಾಂಗಣದಲ್ಲಿ ರೈಲ್ವೆ ಮೇಲ್ ಸೇತುವೆ ನಿರ್ಮಾಣ ಕಾಮಗಾರಿಯಲ್ಲಿ ಮನೆ ಕಳೆದುಕೊಂಡ ೫೪ ಸಂತ್ರಸ್ತ ಕುಟುಂಬದವರು ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ ಸರ್ಕಾರದಿಂದ ಪರಿಹಾರ ಕಲ್ಪಿಸಲು ಜಿಲ್ಲಾಡಳಿತ ಕೈಗೊಂಡಿರುವ ಕ್ರಮಗಳನ್ನು ವಿವರಿಸಿದರು. ಸರ್ಕಾರದಿಂದ ಶೀಘ್ರವೇ ಪರಿಹಾರ ಹಣ ಬಿಡುಗಡೆ ಮಾಡಲು ಪ್ರಯತ್ನಿಸಲಾಗುವುದು. ನೆನೆಗುದಿಗೆ ಬಿದ್ದಿರುವ ಮೇಲ್ಸೇತುವೆ ಕಾರ್ಯ ವೇಗ ಪಡೆಯಲು ಸ್ಥಳೀಯರು ಸಹಕರಿಸಬೇಕು ಎಂದು ಮನವಿ ಮಾಡಿದರು.

><><><><

ಯಾವುದೇ ಸಂಘಸಂಸ್ಥೆಗಳ ಚಟುವಟಿಕೆಗಳನ್ನು ಜನರಿಗೆ ತೊಂದರೆಯಾಗದಂತೆ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲು ಅನುಮತಿ ಪಡೆಯುವಂತೆ ಆದೇಶ ನೀಡಲಾಗಿದ್ದು, ಇದರಲ್ಲಿ ಯಾವುದೇ ಸಂಘಸಂಸ್ಥೆಗಳನ್ನು ಗುರಿಯಾಗಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುತ್ತಿಗೆದಾರರ ಬಾಕಿ ಪಾವತಿಯಾಗದಿದ್ದರೆ ರಾಜ್ಯಪಾಲರನ್ನು ಭೇಟಿಮಾಡುವುದಾಗಿ ಕೂಗೆದ್ದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಸಂಬಂಧಪಟ್ಟ ಸಚಿವರು ಕ್ರಮ ಕೈಗೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದರು.

><><><><

ಶೈಕ್ಷಣಿಕ, ಆರ್ಥಿಕ ಮತ್ತು ಧಾರ್ಮಿಕವಾಗಿ ಉತ್ತರ ಕರ್ನಾಟಕ ಸಾಕಷ್ಟು ಅಭಿವೃದ್ಧಿ ಹೊಂದಿದೆ. ವಿವಿಧ ಸಂಘಸಂಸ್ಥೆಗಳು ಅತ್ಯುತ್ತಮ ಶೈಕ್ಷಣಿಕ ಪರಿಸರವನ್ನು ನಿರ್ಮಾಣ ಮಾಡಿವೆ. ಈ ದಿಸೆಯಲ್ಲಿ ಉತ್ತರ ಕರ್ನಾಟಕವನ್ನು ಹಿಂದುಳಿದ ಪ್ರದೇಶವೆಂದು ಬಿಂಬಿಸುವುದು ಸರಿಯಲ್ಲ ಎಂದು ಭಾರತ ಸರ್ಕಾರ ನವದೆಹಲಿಯ ಎಚ್.ಆರ್. ಸಾಮರ್ಥ್ಯ ನಿರ್ಮಾಣ ಆಯೋಗ ಸದಸ್ಯ ಡಾ.ಆರ್ ಬಾಲಸುಬ್ರಮಣ್ಯಂ ಹೇಳಿದರು. ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಆವರಣದಲ್ಲಿ

ಫಿಜಿಯೋಥೆರಪಿ ಹಾಗೂ ಸ್ಪೀಚ್ ಆಂಡ್ ಹಿಯರಿಂಗ್ ಕಾಲೇಜುಗಳ ಕಟ್ಟಡಗಳನ್ನು ಉದ್ಘಾಟಿಸಿ ಮಾತನಾಡಿದರು.

><><><><

ಇನ್ನು ಹವಾವರ್ತಮಾನ, ರಾಜ್ಯ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿ ದಕ್ಷಿಣ ಮತ್ತು ಉತ್ತರ ಒಳನಾಡಿನ ಹಲವೆಡೆ ಚದುರಿದಂತೆ ಮಳೆಯಾಗಿದೆ. ಗರಿಷ್ಠ ತಾಪಮಾನ ಕಾರವಾರದಲ್ಲಿ ೩೭.೨ ಡಿಗ್ರಿ ಸೆಲ್ಸಿಯೆಸ್ ದಾಖಲಾಗಿದ್ದರೆ, ರಾಜ್ಯದ ಕನಿಷ್ಠ ತಾಪಮಾನ ೧೮.೫ ಡಿಗ್ರಿ ಸೆಲ್ಸಿಯೆಸ್ ದಾಖಲಾಗಿದೆ.

ಕೇರಳ-ಕರ್ನಾಟಕ ಕರಾವಳಿಯ ಆಗ್ನೇಯ ಅರಬ್ಬಿ ಸಮುದ್ರದ ಮತ್ತು ಲಕ್ಷದ್ವೀಪ ಪ್ರದೇಶದಲ್ಲಿ ವಾಯುಭಾರ ಕುಸಿತ ಉಂಟಾಗಿದ್ದು, ತಮಿಳುನಾಡು, ಕೇರಳ ಹಾಗೂ ಕರ್ನಾಟಕದ ಕರಾವಳಿಯಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ಸುತ್ತಮುತ್ತ ಮುಂದಿನ ೨೪ ಗಂಟೆಗಳಲ್ಲಿ ಮೋಡ ಕವಿದ ವಾತಾವರಣವಿದ್ದು, ಹಗುರದಿಂದ ಸಾಧಾರಣ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾ ಇಲಾಖೆ ಮುನ್ಸೂಚನೆ ನೀಡಿದೆ. ಗರಿಷ್ಠ ೨೮, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

><><><><